ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**
ಕುಮಾರ ಪಾರ್ಕ್, ಪಶ್ಚಿಮ ಬಡಾವಣೆ, ಟಿ. ಚೌಡಯ್ಯ ರಸ್ತೆ, ಬೆಂಗಳೂರು – 560020.

ಬೆಂಅಪ್ರಾ/ನಯೋಸ/DLP-144/25-26 618 /2026-27 21/5/2026.

(E-office No. 202057)

# "ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಆದೇಶ"

[ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ17(2) ರ ಅಡಿಯಲ್ಲಿ]

**ವಿಷಯ:** ಯಲಹಂಕ ತಾಲ್ಲೂಕು, ಜಾಲ ಹೋಬಳಿ, ಹೂವಿನಾಯಕನಹಳ್ಳಿ ಗ್ರಾಮದ ಸ. ನಂ.120 ರಲ್ಲಿ 7ಎ-23ಗುಂ ಮತ್ತು ಸ.ನಂ.121 ರಲ್ಲಿ 5ಎ-25ಗುಂ, ಒಟ್ಟು 13ಎ-08ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ನೀಡಲು M/s.Bhartiya Urban Pvt Ltd., ರವರು ಕೋರಿರುವ ಬಗ್ಗೆ.

**ಉಲ್ಲೇಖ:**
1. ಅರ್ಜಿದಾರರ ಅರ್ಜಿ ದಿನಾಂಕ 27.01.2026.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ: 1.135/2026, ದಿನಾಂಕ 10.03.2026.
3. ಈ ಕಛೇರಿ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/DLP-144/214/2025-26, ದಿನಾಂಕ 17.04.2026
4. ಪ್ರಾಧಿಕಾರದ ಆವರಣದಲ್ಲಿರುವ ಕೆನರಾ ಬ್ಯಾಂಕ್ ಶಾಖೆಯಲ್ಲಿ ಶುಲ್ಕ ಪಾವತಿಸಿರುವ ಚಲನ್ ಸಂಖ್ಯೆGN2604644, ದಿನಾಂಕ 23.04.2026.
5. ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ/363/ಬಿಎಂಆರ್/2023(ಇ) ದಿನಾಂಕ 12.02.2024 ರಂತೆ ತಹಶೀಲ್ದಾರ್ ರವರಿಗೆ ಬರೆದ ಪತ್ರ ಸಂಖ್ಯೆ:ಬೆಂಅಪ್ರಾ/ನಯೋಸ/ DLP-144/214/2025-26, ದಿನಾಂಕ 17.04.2026

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ [1] ರಲ್ಲಿನ ಅರ್ಜಿಯಲ್ಲಿ ಯಲಹಂಕ ತಾಲ್ಲೂಕು, ಜಾಲ ಹೋಬಳಿ, ಹೂವಿನಾಯಕನಹಳ್ಳಿ ಗ್ರಾಮದ ಸ. ನಂ.120 ರಲ್ಲಿ 7ಎ-23ಗುಂ ಮತ್ತು ಸ.ನಂ.121 ರಲ್ಲಿ 5ಎ-25ಗುಂ, ಒಟ್ಟು 13ಎ-08ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ನೀಡಲು M/s.Bhartiya Urban Pvt Ltd., ರವರು ಅನುಮೋದನೆ ನೀಡಲು ಕೋರಿರುತ್ತಾರೆ.

ಉಲ್ಲೇಖ [2] ರಲ್ಲಿ ನಮೂದಿಸಿರುವ ದಿನಾಂಕ 10.03.2026 ರಂದು ನಡೆದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ವಿಷಯ ಸಂಖ್ಯೆ1.135/2026 ರಲ್ಲಿ ಮಂಡಿಸಿ

ಚರ್ಚಿಸಲಾಗಿದ್ದು, "ಸಲ್ಲಿಸಿರುವ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯು ಅನುಮೋದಿತ ಮಹಾಯೋಜನೆ RMP-2015 ರ ವಲಯ ನಿಯಮಾವಳಿಗಳಿಗೆ ಅನುಗುಣವಾಗಿರುವುದರಿಂದ, ಯಲಹಂಕ ತಾಲ್ಲೂಕು, ಜಾಲ ಹೋಬಳಿ, ಹೂವಿನಾಯಕನಹಳ್ಳಿ ಗ್ರಾಮದ ಸ.ನಂ.120 ರಲ್ಲಿ 7ಎ-23ಗುಂ ಮತ್ತು ಸ.ನಂ.121 ರಲ್ಲಿ 5ಎ-25ಗುಂ, ಒಟ್ಟು 13ಎ-08ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (17) ರಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಡಿಸಿ, ಅನುಮೋದಿಸಲು ತೀರ್ಮಾನಿಸಲಾಯಿತು. ಈ ಕುರಿತು ನಿಯಮಾನುಸಾರ ಮುಂದಿನ ಕ್ರಮವಹಿಸುವ ಅಧಿಕಾರವನ್ನು ಆಯುಕ್ತರು ರವರಿಗೆ ಪ್ರತ್ಯಾಯೋಜಿಸಲು ನಿರ್ಣಯಿಸಲಾಯಿತು"

ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ಉಲ್ಲೇಖ (3) ರಲ್ಲಿ ವಿವಿಧ ಶುಲ್ಕಗಳ ಬಾಬ್ತು ₹. 65,89,723 /- [₹.ಅರವತ್ತೈದು ಲಕ್ಷದ ಎಂಬತ್ತೊಂಬತ್ತು ಸಾವಿರದ ಏಳುನೂರ ಇಪ್ಪತ್ತಮೂರು ರೂಪಾಯಿಗಳು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಿ, ಚಲನ್ ಸಲ್ಲಿಸಲು ತಿಳಿಸಲಾಗಿತ್ತು. ಅರ್ಜಿದಾರರು ಉಲ್ಲೇಖ (4) ರಲ್ಲಿ ₹. 65,89,723/-[₹. ಅರವತ್ತೈದು ಲಕ್ಷದ ಎಂಬತ್ತೊಂಬತ್ತು ಸಾವಿರದ ಏಳುನೂರ ಇಪ್ಪತ್ತಮೂರು ರೂಪಾಯಿಗಳು ಮಾತ್ರ] ಗಳನ್ನು ಕೆನರಾ ಬ್ಯಾಂಕ್ ನ ಚಲನ್ ನಂ. GN2604644, ದಿನಾಂಕ 23.04.2026 ರಂದು ಪಾವತಿಸಿ ಚಲನ್ ಸಲ್ಲಿಸಿರುತ್ತಾರೆ.

ಸರ್ಕಾರದ ದಿನಾಂಕ 12.02.2024 ರ ಸುತ್ತೋಲೆ ಸಂಖ್ಯೆ:ನಅಇ 363 ಬಿಎಂಆರ್ 2023(ಇ) ರಂತೆ ಪ್ರಶ್ನಿತ ಜಮೀನುಗಳಿಗೆ ಸಂಬಂಧಿಸಿದಂತೆ ಯಾವುದಾದರೂ ವ್ಯಾಜ್ಯ/ಪ್ರಕರಣ/ತಕರಾರು ಇರುವ ಕುರಿತು ವರದಿ ನೀಡುವಂತೆ ತಹಶೀಲ್ದಾರ್ ರವರನ್ನು ಉಲ್ಲೇಖ (5) ರಲ್ಲಿ ಕೋರಲಾಗಿರುತ್ತದೆ. ನಿಗದಿತ 15 ದಿನಗಳ ಅವಧಿಯಲ್ಲಿ ಯಾವುದೇ ಮಾಹಿತಿ ಸ್ವೀಕೃತವಾಗಿರುವುದಿಲ್ಲ. ಆದ್ದರಿಂದ, ಸರ್ಕಾರದ ಸುತ್ತೋಲೆ ಸಂಖ್ಯೆ:ನಅಇ 363 ಬಿಎಂಆರ್ 202 (ಇ), ದಿನಾಂಕ 12.2.2024 ರ ಅನುಸಾರ ಪ್ರಶ್ನಿತ ಜಮೀನಿನ ಕುರಿತು ಯಾವುದೇ ವ್ಯಾಜ್ಯ / ಪ್ರಕರಣ / ತಕರಾರುಗಳು ಇಲ್ಲವೆಂದು ಭಾವಿಸಿ ಅನುಮೋದನೆ ನೀಡಲು ಕ್ರಮವಹಿಸಲಾಗಿದೆ.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (17) ರ ಅನುಸಾರ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಉದ್ಯಾನವನ /ಬಯಲುಜಾಗ ಪ್ರದೇಶಗಳನ್ನು ನೊಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಸಂಬಂಧಿತ ಸ್ಥಳೀಯ ಸಂಸ್ಥೆಗೆ ಪುಕ್ಕಟ್ಟೆಯಾಗಿ ಹಸ್ತಾಂತರಿಸಬೇಕಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಯಲಹಂಕ ತಾಲ್ಲೂಕು, ಜಾಲ ಹೋಬಳಿ, ಹೂವಿನಾಯಕನಹಳ್ಳಿ ಗ್ರಾಮದ ಸ. ನಂ.120 ರಲ್ಲಿ 7ಎ-23ಗುಂ ಮತ್ತು ಸ.ನಂ.121 ರಲ್ಲಿ 5ಎ-25ಗುಂ, ಒಟ್ಟು 13ಎ-08ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಅನುಮೋದನೆ ನೀಡಲಾಗಿದೆ.

| | |
|---|---|
| 1 | ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಉದ್ಯಾನವನ ಮತ್ತು ಬಯಲು ಜಾಗಗಳ ಪ್ರದೇಶವನ್ನು ನೊಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ಸ್ಥಳೀಯ ಸಂಸ್ಥೆಗೆ ಯಾವುದೇ ಪರಿಹಾರ ಕೋರದೆ ಹಸ್ತಾಂತರಿಸುವುದು. |

| | |
|---|---|
| 2 | ಪ್ರಾಧಿಕಾರವು ಅನುಮೋದಿಸಿರುವ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ. |
| 3 | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸುವ ಪ್ರದೇಶದಲ್ಲಿ ವಿವಿದ ಜಾತಿಯ ಮರಗಿಡಗಳನ್ನು ಬೆಳಸಿ ಅಭಿವೃದ್ಧಿ ಪಡಿಸುವುದು. ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. |
| 4 | ವಿವರವಾದ ಕಟ್ಟಡ ನಕ್ಷೆಗಳನ್ನು ಸಕ್ಷಮ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು. |
| 5 | ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ತೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು. ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ತೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು. |
| 6 | ಪ್ರಶ್ನಿತ ಜಮೀನುಗಳಲ್ಲಿ ಉತ್ಖನನ ದಿಂದ (Excavation) ಲಭ್ಯವಾಗುವ ಉಪಖನಿಜಗಳಾದ ಮುರ್ರಂ, ಕಟ್ಟಡ ಕಲ್ಲು ಮತ್ತು ಇತರೆ ಉಪಖನಿಜಗಳ ಕಾನೂನು ಬದ್ಧ ವಿಲೇವಾರಿಗೆ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಾವಳಿ 1994 ರ ತಿದ್ದುಪಡಿ ನಿಯಮಾವಳಿ 2023 ನಿಯಮ 3-ಎ ಅನ್ವಯ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಕಡ್ಡಾಯವಾಗಿ ಅನುಮತಿಯನ್ನು ಪಡೆದು ಮುಂಗಡ ರಾಜಧನ ಮತ್ತು ಇತರೆ ಅನ್ವಯಿಕ ಶುಲ್ಕಗಳನ್ನು ಪಾವತಿಸತಕ್ಕದ್ದು. |
| 7 | ಕಟ್ಟಡ ಕಾಮಗಾರಿ ಪ್ರಾರಂಭವಾದ ನಂತರ ಕಟ್ಟಡ ಸುರಕ್ಷತೆಯ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವು ಪರಿಶೀಲಿಸಿಕೊಳ್ಳತಕ್ಕದ್ದು. ಸಿವಿಲ್ ಕಾಮಗಾರಿ ಮತ್ತು ಕಟ್ಟಡ ಕಾಮಾಗಾರಿಗೆ BWSSB ಯಿಂದ ಸಂಸ್ಕರಿಸಿದ ತ್ಯಾಜ್ಯ ನೀರನ್ನು ಪಡೆದು ಉಪಯೋಗಿಸಿಕೊಳ್ಳತಕ್ಕದ್ದು. |
| 8 | ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಕಾಯ್ದಿರಿಸಿರುವ ಸಿ.ಎ ಜಾಗವನ್ನು ಯಥಾವತ್ತಾಗಿ ಹಾಲಿ ಸ್ಥಳದಲ್ಲಿ ವಲಯ ನಿಯಮಾವಳಿಗಳ ಅಧ್ಯಾಯ 7.1.2 ರಂತೆ ಅಭಿವೃದ್ಧಿಪಡಿಸತಕ್ಕದ್ದು. |
| 9 | ಅನುಮೋದಿತ ಮಹಾಯೋಜನೆ RMP-2015 ರ ವಲಯ ನಿಯಮಾವಳಿಗಳ ಅಧ್ಯಾಯ 3.16 (xv) ರ Sub Clause (b) ರನ್ವಯ ವಸತಿ ಅಭಿವೃದ್ಧಿ ಯೋಜನೆ ನಕ್ಷೆಯಲ್ಲಿ ಕಾಯ್ದಿರಿಸಿರುವ ಉದ್ಯಾನವನ / ಬಯಲುಜಾಗದ ಪ್ರದೇಶವು ಸೇರಿದಂತೆ ಹಾಗೂ ವಸತಿ ಅಭಿವೃದ್ಧಿ ಯೋಜನಾ ಪ್ರದೇಶದಲ್ಲಿ ಪ್ರತಿ 240.0 ಚ.ಮೀ Builtup Area (FAR) ಪ್ರದೇಶಕ್ಕೆ ಒಂದು ಮರದಂತೆ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು. ಸ್ವಾಧೀನಾನುಭವ ಪ್ರಮಾಣ ಪತ್ರ ವಿತರಿಸುವ ಸಕ್ಷಮ ಪ್ರಾಧಿಕಾರವು ಸದರಿ ಷರತ್ತನ್ನು ಪಾಲಿಸಿರುವ ಕುರಿತು ಮೇಲೆ ತಿಳಿಸಿದ ವಲಯ ನಿಯಮಾವಳಿಗಳ ಅವಕಾಶದಂತೆ ಪರಿಶೀಲಿಸಿ ಕ್ರಮವಹಿಸತಕ್ಕದ್ದು. |
| 10 | ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ / ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 11 | ದಿನಾಂಕ: 16/1/2010 ರಂದು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡವಳಿಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಹಾಗೂ ದಿನಾಂಕ: 07/01/2011 ರಂದು ಜರುಗಿದ ಸಮಿತಿ ಸಭೆಯ ವಿಷಯ ಸಂಖ್ಯೆ:09/2011ರ ತೀರ್ಮಾನದಂತೆ ಅಭಿವೃದ್ಧಿ ನಕ್ಷೆಯಲ್ಲಿ Arrangement of Blocks ಗಳನ್ನು ವಲಯನಿಯಮಾವಳಿಗಳಂತೆ ಪರಿಶೀಲಿಸಲಾಗಿದ್ದು, ಕಟ್ಟಡನಕ್ಷೆಗೆ ಸಂಬಂಧಿಸಿದ ಇತರೆ ವಿವರಗಳನ್ನು ಪರಿಶೀಲಿಸುವುದಿಲ್ಲ. ಇದನ್ನು ಕಟ್ಟಡನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರವು ಸದರಿ ಕಟ್ಟಡ ನಿರ್ಮಾಣ ಸಂಬಂಧಿಸಿದಂತೆ ಅವಶ್ಯವಿರುವ ವಿವಿಧ ಇಲಾಖೆಗಳಿಂದ ಅಗತ್ಯ NOC ಗಳನ್ನು ಮತ್ತು |

| | |
|---|---|
| | ಇನ್ನಿತರೇ ಮಾಹಿತಿಗಳನ್ನು ಅರ್ಜಿದಾರರಿಂದ ಪಡೆದು ನಿಯಮಾನುಸಾರ ಪರಿಶೀಲಿಸಿಕೊಳ್ಳತಕ್ಕದ್ದು. |
| 12 | ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ / ದಾಖಲಾತಿ ನೀಡಿ ಅನುಮೋದನೆ ಪಡೆದಿದ್ದು ದೃಢಪಟ್ಟಲ್ಲಿ ಮತ್ತು ಮಾಲೀಕತ್ವದ ಬಗ್ಗೆ ನ್ಯಾಯಾಲಯದಲ್ಲಿ ತಕರಾರು ಉದ್ಭವವಾದಲ್ಲಿ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯನ್ನು ರದ್ದುಗೊಳಿಸುವ ಅಥವಾ ಹಿಂಪಡೆಯುವ ಅಧಿಕಾರವನ್ನು ಕೆಟಿಸಿಪಿ ಕಾಯ್ದೆ ಕಲಂ 76 (O) ರಡಿಯಲ್ಲಿ ಪ್ರಾಧಿಕಾರದ ಆಯುಕ್ತರು ಅಧಿಕಾರ ಹೊಂದಿದ್ದು, ಅದರಂತೆ ಕ್ರಮ ಜರುಗಿಸಲಾಗುವುದು. |
| 13 | ವಸತಿ ಅಭಿವೃದ್ಧಿ ಯೋಜನೆಯಲ್ಲಿನ ವಸತಿ ಘಟಕಗಳಿಂದ ಉತ್ಪತ್ತಿಯಾಗುವ ಘನತ್ಯಾಜ್ಯಗಳ ವಿಂಗಡಣೆ ಮತ್ತು ಶೇಖರಣೆಗಾಗಿ ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 14 | ಪ್ರಸ್ತಾಪಿತ ಜಮೀನನ್ನು ಅಭಿವೃದ್ದಿಪಡಿಸುವ ಸಂದರ್ಭದಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಮಳೆ ನೀರು ಕೋಯ್ಲಿಗ್ಗೆ ಸಂಬಂಧಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಯಾವುದೇ ರೀತಿಯ ಮಳೆ ನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ದಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |
| 15 | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿ ಪಡಿಸುವ ಸಂದರ್ಭದಲ್ಲಿ BESCOM ನಿರ್ದೇಶನದಂತೆ ಎಲೆಕ್ಟ್ರಿಕ್ ಕೇಬಲ್ ಗಳನ್ನು ಅಳವಡಿಸತಕ್ಕದ್ದು. |
| 16 | ನಾಲಾ ಬಫರ್ ಗಾಗಿ ಕಾಯ್ದಿರಿಸಿರುವ ಪ್ರದೇಶವನ್ನು ಸ್ಥಳೀಯ ಸಂಸ್ಥೆ ಅಥವಾ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇತರೆ ಸರ್ಕಾರಿ ಅಥವಾ ಸರ್ಕಾರೇತರ ಸಂಸ್ಥೆಗಳಿಂದ Storm Water Drain ಅಥವಾ ಒಳಚರಂಡಿ ವ್ಯವಸ್ಥೆಗಳು ಹಾಗೂ ರಸ್ತೆಯನ್ನು ಅಭಿವೃದ್ದಿಪಡಿಸುವ ಸಂದರ್ಭದಲ್ಲಿ ಮುಫತ್ತಾಗಿ ಸಾರ್ವಜನಿಕ ಉಪಯೋಗಕ್ಕಾಗಿ ನೊಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಹಸ್ತಾಂತರಿಸತಕ್ಕದ್ದು. |
| 17 | ರೆವಿನ್ಯೂ ದಾಖಲೆಗಳ / ಜಮೀನಿನ ಮಾಲೀಕತ್ವದ ದಾಖಲೆಗಳ ಸಂಬಂಧ ಯಾವುದೇ ನ್ಯಾಯಾಲಯದಲ್ಲಿ ಲೋಕಾಯುಕ್ತದಲ್ಲಾಗಲೀ ಯಾವುದೇ ಪ್ರಕರಣ ಇರುವುದಿಲ್ಲವೆಂದು ಸಲ್ಲಿಸಿರುವ ನೋಟರೈಸ್ಡ್ ಪ್ರಮಾಣ ಪತ್ರಕ್ಕೆ ಬದ್ಧರಾಗಿರತಕ್ಕದ್ದು .ಪ್ರಾಧಿಕಾರವು ಈ ಬಗ್ಗೆ ಜವಾಬ್ದಾರಿಯಾಗುವುದಿಲ್ಲ. |
| 18 | ವಸತಿ ಯೋಜನೆಯಲ್ಲಿನ ವಸತಿ ಘಟಕಗಳಿಗೆ ಕುಡಿಯುವ ನೀರಿಗಾಗಿ ಮತ್ತು ಇತರೆ ಉಪಯೋಗದ ನೀರಿಗಾಗಿ ಪ್ರತ್ಯೇಕವಾದ ಜೋಡಿ ಕೊಳಾಯಿ ವ್ಯವಸ್ಥೆಯನ್ನು (Duel piping System) ಮಾಡತಕ್ಕದ್ದು. ವಸತಿ ಘಟಕಗಳಿಂದ ಬರುವ ಕೊಳಚೆ ನೀರನ್ನು ಸಂಸ್ಕರಣೆ ಮಾಡಲು ಯೋಜನೆಯಲ್ಲಿ ಸಂಸ್ಕರಣಾ ಘಟಕ ಸ್ಥಾಪಿಸಿ, ಸಂಸ್ಕರಿಸಿದ ನೀರನ್ನು ಇತರೆ ಉಪಯೋಗಗಳಿಗಾಗಿ ಉಪಯೋಗಿಸತಕ್ಕದ್ದು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. |
| 19 | BWSSB,BESCOM, KSPCB, ವಾಯುಯಾನ ಪ್ರಾಧಿಕಾರ , ಅಗ್ನಿಶಾಮಕ ಇಲಾಖೆ ಗಳಿಂದ NOC ಪಡೆದು ಕಟ್ಟಡ ನಕ್ಷೆ ಅನುಮೋದನೆ ಮೊದಲು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಬೇಕಿರುತ್ತದೆ . ಅನುಮತಿ ನೀಡುವ ಸಕ್ಷಮ ಪ್ರಾಧಿಕಾರವು ಅದನ್ನು ಪರಿಸೀಲಿಸಿಕೊಳ್ಳತಕ್ಕದ್ದು. |
| 20 | ಪ್ರಶ್ನಿತ ಪ್ರದೇಶದಲ್ಲಿ ಹಾದು ಹೋಗುವ ಹಳ್ಳ ಕೊಳ್ಳಗಳ ನೀರಿನ ಹರಿವಿಗೆ ಅಡಚಣೆ ಉಂಟು ಮಾಡದೆ ಸರಾಗವಾಗಿ ಹಾದು ಹೋಗುವಂತೆ ಅಭಿವೃದ್ಧಿ ಪಡಿಸುವುದು. |
| 21 | ರೇರಾ ಅಧಿನಿಯಮ, 2016 ಹಾಗೂ ಸಂಬಂದಿತ ನಿಯಮಗಳು, 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೋಂದಣಿ ಮಾಡಿಸುವುದು. |
| 22 | ಸ್ವಾಭಾವಿಕವಾಗಿ ಇಳಿಮಟ್ಟದ ಕಡೆ ಹೋಗುವ ಮಳೆನೀರನ್ನು ಡ್ರೈನ್ ಮುಖಾಂತರ ವ್ಯಾಲಿಗೆ ತಂದು ಸೇರಿಸುವುದು ಹಾಗೂ ನೀರು ಸರಾಗವಾಗಿ ಹರಿಯಲು ಸೂಕ್ತ ವ್ಯವಸ್ಥೆ ಮಾಡುವುದು. |

| | |
|---|---|
| 23 | ಕಟ್ಟಡ ನಕ್ಷೆ ಅನುಮೋದನೆ ಸಮಯದಲ್ಲಿ ತಳಮಹಡಿ ಅಗತ್ಯತೆ ಬಗ್ಗೆ Water table ನ ವರದಿ ಪಡೆದು ಅದಕ್ಕನುಗುಣವಾಗಿ ಕ್ರಮ ಜರುಗಿಸುವುದು. |
| 24 | ಬಫರ್ ಪ್ರದೇಶದಲ್ಲಿ ಗಿಡಮರಗಳನ್ನು ಬೆಳಸತಕ್ಕದ್ದು. |
| 25 | ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ಮೇಲ್ಕಂಡ ಷರತ್ತುಗಳಿಗೊಳಪಟ್ಟು ಯಲಹಂಕ ತಾಲ್ಲೂಕು, ಜಾಲ ಹೋಬಳಿ, ಹೂವಿನಾಯಕನಹಳ್ಳಿ ಗ್ರಾಮದ ಸ. ನಂ.120 ರಲ್ಲಿ 7ಎ-23ಗುಂ ಮತ್ತು ಸ.ನಂ.121 ರಲ್ಲಿ 5ಎ-25ಗುಂ, ಒಟ್ಟು 13ಎ-08ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲಾಗಿದೆ.

Digitally signed by
L SHASHIKUMAR
Date: 16-05-2026
13:57:25
ನಗರ ಯೋಜಕ ಸದಸ್ಯರು,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು.

**ಇವರಿಗೆ,**
M/s.Bhartiya Urban Pvt Ltd.,
Bhartiya S Parkle, Bhartiya City,
Thanisandra Main Road,
Bangalore-560064

**ಪ್ರತಿಯನ್ನು:-**

1. ರಿಯಲ್ ಎಸ್ಟೇಟ್ ರೆಗ್ಯೂಲೇಟರಿ ಅಥಾರಿಟಿ [RERA], ಸಿಲ್ವರ್ ಜ್ಯೂಬಿಲಿ ಬ್ಲಾಕ್, 3 ನೇ ಕ್ರಾಸ್ ರಸ್ತೆ, ಸಂಪಂಗಿರಾಮನಗರ, ಬೆಂಗಳೂರು-560 002 ಇವರಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
2. ಅಭಿಯಂತರ ಸದಸ್ಯರು, ಬೆಂಅಪ್ರಾ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
3. ಕಾರ್ಯಪಾಲಕ ಅಭಿಯಂತರರು [ಉತ್ತರ ವಿಭಾಗ] , ಬೆಂಅಪ್ರಾ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
4. ಕಂದಾಯ ಅಧಿಕಾರಿಗಳು [ಉತ್ತರ ವಿಭಾಗ], ಬೆಂಅಪ್ರಾ, ಬೆಂಗಳೂರು ಇವರಿಗೆ ಅನುಮೋದಿತ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯೊಂದಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
5. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಹೂವಿನಾಯಕನಹಳ್ಳಿ ಗ್ರಾಮಪಂಚಾಯಿತಿ, ಯಲಹಂಕ ತಾಲ್ಲೂಕು ರವರಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.

**ಸೂಚನೆ:-**

1. ವ್ಯವಸ್ಥಾಪಕರು, EDP ಶಾಖೆ ಇವರಿಗೆ ಕಳುಹಿಸುತ್ತಾ, ಇದರೊಂದಿಗೆ ಲಗತ್ತಿಸಿರುವ ಸಿ.ಡಿ.ಯಲ್ಲಿ ದಾಖಲಿಸಲಾದ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗಳ ನೀಲಿ ನಕ್ಷೆ ಮತ್ತು ಕಾರ್ಯಾದೇಶ ಇವುಗಳನ್ನು ಪ್ರಾಧಿಕಾರದ Website ನಲ್ಲಿ ಪ್ರಚುರಪಡಿಸಲು ತಿಳಿಸಲಾಗಿದೆ.
2. ಸದರಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯ ವಿವರಗಳನ್ನು ಕಾರ್ಯಾದೇಶದ ವಹಿಯ ಪುಟ ಸಂಖ್ಯೆ      ರಲ್ಲಿ ನಮೂದಿಸಿದೆ.